ಆಳಂದ ತಾಲ್ಲೂಕಿನ ಯಳಸಂಗಿ ಗ್ರಾಮಕ್ಕೆ ಗಡಿ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

1839 - ಶ್ರೀ ಸುಭಾಶ್ ಗುತ್ತೇದಾರ್ (ಆಳಂದ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಆಳಂದ ತಾಲ್ಲೂಕಿನ ಯಳಸಂಗಿ ಗ್ರಾಮಕ್ಕೆ ಸುಮಾರು ವರ್ಷಗಳಿಂದ ಗಡಿನಾಡ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ಸುರಪುರ ತಾಲ್ಲೂಕಿನ ಯದುನೂರು ಗ್ರಾಮದಿಂದ ಸ್ಥಳಾಂತರಗೊಂಡ ಆದೇಶವು ಬಂದಿದ್ದು, ಇಲ್ಲಿಯವರೆಗೆ ಕಾರ್ಯಗತಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದರೆ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ?*

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿಲ್ಲ.

ಆ) ಯಳಸಂಗಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಜಿಲ್ಲಾ ಪಂಚಾಯತ್ ಅನುಮೋದನೆಯೊಂದಿಗೆ ಪ್ರಸ್ತಾವನೆ ಬಂದಲ್ಲಿ ಪರಿಗಣಿಸಲಾಗುವುದು.

ಸಾರ್ವಜನಿಕ ಆಸ್ಪತ್ರೆ ಹಾಗೂ ಪ್ರಾಥಮಿಕ ಕೇಂದ್ರಗಳಲ್ಲಿ ಔಷಧ ಸರಬರಾಜು ಕೊರತೆ.

1840 - ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಬಹಳಷ್ಟು ಸಾರ್ವಜನಿಕ ಆಸ್ಪತ್ರೆ ಪ್ರಾಥಮಿಕ ಕೇಂದ್ರಗಳಲ್ಲಿ ಔಷಧ ಸರಬರಾಜಿನ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರವು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು).*

ಶ್ರೀ ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಸಾರ್ವಜನಿಕ ಗ್ರಂಥಾಲಯಗಳಲ್ಲಿ ಪುಸ್ತಕಗಳ ಖರೀದಿ.

1841 - ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1996-97, 1997-98ನೇ ಸಾಲಿನಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಎಷ್ಟು ಸಾವಿರ ರೂಪಾಯಿಗಳ ಪುಸ್ತಕಗಳನ್ನು ಖರೀದಿಸಲಾಗಿದೆ? (ವಿವರ ನೀಡುವುದು)*